ದಿಃ 10-08-2023 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣೀಕರಿಸಲಾಯಿತು.

ಪಾಟೀ ಸವಾಲು ಶ್ರೀ. ಎನ್. ಎಂ **1** ನೇ ಪ್ರತಿವಾದಿ ಪರ ವಕೀಲರಿಂದಃ

ನಾನು ಮಾಸ್ಟರ್ ಆಫ್ ಸೋಶಿಯಲ್ ವರ್ಕ್ ಪದವೀದರನಾಗಿರುತ್ತೇನೆ. ನಾನು ಬೇವಿನಹಳ್ಳಿಯಲ್ಲಿ ವಾಸವಿದ್ದೇನೆ. ನಾನು ವಿದ್ಯಾಭ್ಯಾಸವನ್ನು ಬೆಂಗಳೂರಿನಲ್ಲಿ ಮಾಡುತ್ತಿದ್ದೇನೆ. ನನ್ನ ತಂದೆ ತಾಯಿಯವರು ಬೇವಿನಹಳ್ಳಿಯಲ್ಲಿ ವಾಸವಿದ್ದಾರೆ. ಈ ದಾವೆಯನ್ನು ಏನು ಪರಿಹಾರಕ್ಕಾಗಿ ಹೂಡಿದ್ದೇನೆ ಎಂದು ನಾನು ತಿಳಿದುಕೊಂಡಿದ್ದೇನೆ. ದಾವಾ ಆಸ್ತಿಯು ನನ್ನ ತಾತನಿಗೆ ಸಂಬಂಧಪಟ್ಟ ಆಸ್ತಿಯಾಗಿರುತ್ತದೆ. ದಾವಾ ಆಸ್ತಿಯು ಸರ್ವೆ ನಂ. 297. ದಾವಾ ಆಸ್ತಿಯ ಚೆಕ್ಕು ಬಂದಿ ಪೂರ್ವಕ್ಕೆ ಹಳ್ಳ, ಪಶ್ಚಿಮಕ್ಕೆ ಗೌರಮ್ಮರವರ ಜಮೀನು, ಉತ್ತರಕ್ಕೆ ಮುದ್ದಮ್ಮರವರ ಜಮೀನು ಹಾಗೂ ದಕ್ಷಿಣಕ್ಕೆ ಕಿರಣರವರ ಜಮೀನು. ದಾವಾ ಆಸ್ತಿಯಲ್ಲಿ 1 ನೇ ಪ್ರತಿವಾದಿಯು ಸ್ವಾಧೀನದಲ್ಲಿದ್ದಾರೆ. ದಾವಾ ಆಸ್ತಿಗೆ ಸಂಬಂಧಪಟ್ಟಂತೆ ಕ್ರಯ ಪತ್ರ ಆದಾಗ ನಾನು ಬೆಂಗಳೂರಿನಲ್ಲಿದ್ದೆನು. ದಾವಾ ಆಸ್ತಿಯ ಪಹಣಿಗಳನ್ನು 2019 ನೇ ಇಸವಿಯ ಅಕ್ಟೋಬರ್ ತಿಂಗಳಿನಲ್ಲಿ ತೆಗೆಸಿ ನೋಡಿದಾಗ ದಾವಾ ಆಸ್ತಿಯ ಮಾರಾಟವಾಗಿರುವ ವಿಚಾರ ನನಗೆ ತಿಳಿಯಿತು. ದಾವಾ ಆಸ್ತಿಯು ನನ್ನ ತಾತನಿಗೆ ಪಿತ್ರಾರ್ಜಿತವಾಗಿ ಬಂದ ಆಸ್ತಿಯಾಗಿರುತ್ತದೆ. ದಾವಾ ಆಸ್ತಿಯು ನನ್ನ ತಾತನ ಪಿತ್ರಾರ್ಜಿತ ಆಸ್ತಿ ಎಂದು ತೋರಿಸಲು ನ್ಯಾಯಾಲಯದ ಮುಂದೆ ದಾಖಲೆಗಳನ್ನು ಹಾಜರುಪಡಿಸಿದ್ದೇನೆ.

ದಾವಾ ಆಸ್ತಿಯು ನನ್ನ ತಾತನಿಗೆ ಸರ್ಕಾರದಿಂದ ಮಂಜೂರಾದ ಆಸ್ತಿಯಾಗಿರುತ್ತದೆ ಎಂದರೆ ಸರಿ. ದಾವಾ ಆಸ್ತಿಯು ಸರ್ಕಾರದಿಂದ ಮಂಜೂರಾದ ವಿಚಾರಕ್ಕೆ ಸಂಬಂಧಪಟ್ಟ ದಾಖಲೆಗಳನ್ನು ಹಾಜರುಪಡಿಸಿರುವಿರಾ? ಎಂಬ ಪ್ರಶ್ನೆಗೆ ಸಾಕ್ಷಿ ಮ್ಯೂಟೇಶನ್ ಅನ್ನು ಹಾಜರುಪಡಿಸಿರುತ್ತೇನೆ ಎಂದು ನುಡಿಯುತ್ತಾರೆ. ದಾವಾ ಆಸ್ತಿಯಲ್ಲಿ ನನಗೆ ಮತ್ತು 2 ನೇ ವಾದಿಗೆ ಯಾವುದೇ ಹಕ್ಕು ಅಥವಾ ಭಾಗಾಂಶ ಇರುವುದಿಲ್ಲ ಎಂದರೆ ಸರಿಯಲ್ಲ. ನನ್ನ ತಂದೆ-ತಾಯಿಯು ದಾವಾ ಆಸ್ತಿಯನ್ನು ಮಾರಾಟ ಮಾಡಿದ್ದರೂ ಸಹ ಪ್ರತಿವಾದಿಗಳಿಗೆ ತೊಂದರೆ ನೀಡಬೇಕೆಂಬ ಉದ್ದೇಶದಿಂದ ನಮ್ಮ ಮೂಲಕ ಈ ಸುಳ್ಳು ದಾವೆಯನ್ನು ಹೂಡಿಸಿರುತ್ತಾರೆ ಎಂದರೆ ಸರಿಯಲ್ಲ.

**(ಮುಂದುವರೆದ ಪಾಟೀ ಸವಾಲಿಗೆ ಕಾಲಾವಕಾಶ ಕೋರಿದ್ದು ನೀಡಲಾಯಿತು)**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು).

ಓ.ಹೇ.ಕೇ.ಸ. ಇದೆ

ಸಹಿ/-

ಪ್ರ.ಸಿ.ನ್ಯಾ ಮತ್ತು ಜೆಎಂಎಫ್‌ಸಿ,

ಗೌರಿಬಿದನೂರು